ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/45/ಇಸಿಎಸ್(3)/2018

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 16.03.2019.

**ಸುತ್ತೋಲೆ**

ವಿಷಯ : 2003 ರ ಪಠ್ಯಕ್ರಮ (ಸಿ-03) ಮತ್ತು 2009 ರ ಪಠ್ಯಕ್ರಮ (ಸಿ-09) ಗಳಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಪ್ರವೇಶ ಪಡೆದು ವ್ಯಾಸಂಗ ತೊರೆದ ವಿದ್ಯಾರ್ಥಿಗಳ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ : ಕರ್ನಾಟಕ ರಾಜ್ಯ ಮಾಜಿ ಶಾಸಕರ ವೇದಿಕೆ, ಬೆಂಗಳೂರು ಇವರ ಪತ್ರ ದಿನಾಂಕ: 11.03.2019

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಪತ್ರದಲ್ಲಿ ತಾಂತ್ರಿಕ ಕಾಲೇಜುಗಳಲ್ಲಿ ದಾಖಲಾತಿ ಪಡೆದ ಹಲವಾರು ವಿದ್ಯಾರ್ಥಿಗಳು ವೈಯಕ್ತಿಕ ಕಾರಣಗಳಿಂದ ವ್ಯಾಸಂಗ ನಿಲ್ಲಿಸಿರುತ್ತಾರೆ. ಸದರಿ ವಿದ್ಯಾರ್ಥಿಗಳನ್ನು ಉತ್ತೇಜಿಸುವ ಮೂಲಕ ವ್ಯಾಸಂಗ ಮುಂದುವರೆಸುವಂತಹ ಪ್ರೇರಣೆ ನೀಡುವ ಉದ್ದೇಶದಿಂದ ಖಾಸಗಿ ಸಂಸ್ಥೆಯೊಂದು ಮುಂದೆ ಬಂದಿರುತ್ತದೆ. ಆದಕಾರಣ ಕಾಲೇಜುಗಳಲ್ಲಿ ವ್ಯಾಸಂಗ ತೊರೆದ ವಿದ್ಯಾರ್ಥಿಗಳ ಮಾಹಿತಿ ನೀಡುವಂತೆ ತಿಳಿಸಲಾಗಿದೆ.

ತಾಂತ್ರಿಕ ಪರೀಕ್ಷಾ ಮಂಡಳಿಯ ಪಾಲಿಟೆಕ್ನಿಕ್‌ಗಳಲ್ಲಿ 2003 ರ ಪಠ್ಯಕ್ರಮ (ಸಿ-03) ಮತ್ತು 2009 ರ ಪಠ್ಯಕ್ರಮ (ಸಿ-09) ಗಳಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಪ್ರವೇಶ ಪಡೆದು ವ್ಯಾಸಂಗ ತೊರೆದಿರುವ ವಿದ್ಯಾರ್ಥಿಗಳ ವಿವರಗಳ ಪಟ್ಟಿಯನ್ನು M.S.EXCEL ನಮೂನೆಯಲ್ಲಿ ತಯಾರಿಸಿ ಈ ಕೆಳಗೆ ತಿಳಿಸಿದ ಇ-ಮೇಲ್ ವಿಳಾಸಕ್ಕೆ ಕಳುಹಿಸಿಕೊಡಲು ತಿಳಿಸಲಾಗಿದೆ.

**E-mail ID : btejdexam@gmail.com**

| ಕ್ರಂ.ಸಂ | ವಿದ್ಯಾರ್ಥಿಯ ಹೆಸರು | ನೋಂದಣಿ ಸಂಖ್ಯೆ | ದಾಖಲಾತಿ ಪಡೆದ ವರ್ಷದ ವಿವರ | ದಾಖಲಾತಿ ಪಡೆದ ಕೋರ್ಸಿನ ವಿವರ | ವ್ಯಾಸಂಗದ ವಿವರ | ವಿದ್ಯಾರ್ಥಿಯ ಮೊಬೈಲ್ ಸಂಖ್ಯೆ (ಲಭ್ಯವಿದ್ದಲ್ಲಿ) | ವಿದ್ಯಾರ್ಥಿಯ ಅಂಚೆ ವಿಳಾಸ |
|---|---|---|---|---|---|---|---|
| 1. | | | | | | | |
| 2. | | | | | | | |
| 3 | | | | | | | |

ಈ ವಿಷಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು **ದಿನಾಂಕ: 25.03.2019 ರೊಳಗಾಗಿ** ಕಳುಹಿಸಿಕೊಡಲು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ - ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ : ಇ-ಆಡಳಿತ - ಅಂತರ್ಜಾಲದಲ್ಲಿ ಪ್ರಕಟಿಸಲು.